# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ 07 ಬ್ಯಾಟರಾಯನಪುರ ವಾರ್ಡ್ ಸಮಿತಿ ಸಭೆಯ ನಡವಳಿ.

ದಿನಾಂಕ **06.11.2021** ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ **11.00** ಕ್ಕೆ ನೋಡಲ್ ಅಧಿಕಾರಿಗಳ ಸಮಕ್ಷಮದಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಯಿತು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ನಂ.07, ಬ್ಯಾಟರಾಯನಪುರ ವಾರ್ಡ್‌ಗೆ ಮಾನ್ಯ ಆಯುಕ್ತರ ಆದೇಶದಂತೆ ನೋಡಲ್ ಅಧಿಕಾರಿಯಾಗಿ ನಿಯೋಜಿಸಲಾಗಿರುವ ಶ್ರೀ.ಪ್ರಕಾಶ್.ಜಿ ರವರು ಸಭೆಯಲ್ಲಿ ಹಾಜರಿದ್ದು, ಈ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಗಮನ ಹರಿಸಿ, ಕೈಗೊಂಡ ಕ್ರಮದ ಬಗ್ಗೆ ಚರ್ಚಿಸಲಾಯಿತು.

1. ಘನತ್ಯಾಜ್ಯ ನಿರ್ವಹಣೆ:
   1. ಘಣತ್ಯಾಜ್ಯಾ ನಿರ್ವಹಣೆಗೆ ಸಂಭಂದಿಸಿದಂತೆ, ದಿನಾಂಕ 10.11.2021 ರಿಂದ ಹೊಸ ಗುತ್ತುಗೆದಾರರಿಗೆ ಕಾರ್ಯಾದೇಶ ನೀಡುವುದಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿರುತ್ತಾರೆ. ಅದರಂತೆ ಪ್ರಸುತ್ತ ರಸ್ತೆ ಬದಿಯಲ್ಲಿ ಬಿದ್ದಿರುವ ಕಸವನ್ನು ತೆರವು ಮಾಡಬೇಕೆಂದು ಸೂಚಿಸಲಾಯಿತು. ಪ್ರತಿ ವಾರವು ಒಂದು ಬ್ಲಾಕ್ ಸ್ಪಾಟ್‌ನ್ನು ಸುಚಿ ಗೊಳಿಸುವ ಕೆಲಸವನ್ನು ನಿರ್ವಹಿಸಬೇಕೆಂದು ಅಭಿಪ್ರಾಯ ಪಟ್ಟಲಾಯಿತು.
2. ಆರೋಗ್ಯ ಇಲಾಖೆ:
   1. ಅಮೃತಹಳ್ಳಿ ಕೆರೆಯ ಆವರಣದಲ್ಲಿ ಕಲುಷಿತ ನೀರು ನಿಂತಿರುವ ಕಾರಣ ಸೊಳ್ಳೆಗಳ ಕಾಟ ಹೆಚ್ಚಾಗಿರುವುದರಿಂದ, ಓಷದಿಯನ್ನು ಸಿಂಪಡಿಸಿಕೊಡಬೇಕೆಂದು ಮುನಿಸ್ವಾಮಿಗೌಡ ಬಡಾವಣೆಯ ನಿವಾಸಿಗಳು ಮನವಿ ಮಾಡಿರುತ್ತಾರೆ. ಸೂಕ್ತ ಕ್ರಮ ಕೈಗೊಳ್ಳುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು.
3. ಕಾಮಗಾರಿ ವಿಭಾಗ:
   1. ಪ್ರಸುತ್ತ ರಸ್ತೆ ಗುಂಡಿಗಳನ್ನು ಮುಚ್ಚುವ ಕೆಲಸ ಪ್ರಗತಿಯಲ್ಲಿದ್ದು, ಸಾರ್ವಜನಿಕರ ವಾರ್ಡ್ ರಸ್ತೆಗಳಲ್ಲಿ ಎಲ್ಲಿಯಾದರೂ ಸರಿ, ರಸ್ತೆ ಗುಂಡಿ ಕಂಡು ಬಂದಲ್ಲಿ, ಕೂಡಲೇ ವಾರ್ಡ್ ಕಛೇರಿಗೆ ತಿಳಿಸಲು ಮನವಿ ಮಾಡಲಾಯಿತು.
   2. ಮುನಿಸ್ವಾಮಿಗೌಡ ಬಡಾವಣೆಯ ಎರಡು ರಸ್ತೆಗಳಲ್ಲಿ, ಮಳೆ ಬಂದಾಗ, ಮನೆಗಳಿಗೆ ನೀರು ನುಗ್ಗುವ ಬಗ್ಗೆ ದೂರುಗಳು ಬಂದಿರುತ್ತದೆ. ಸದರಿ ವಿಷಯದ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲು ಅಲ್ಲಿನ ಸ್ಥಳೀಯರೆಲ್ಲರು, ಕೂಡಿ ಸಭೆಯನ್ನು ಏರ್ಪಡಿಸಲು ಸುಚಿಸಲಾಯಿತು. ಅಂದು ಸಹಾಯಕ ಕಾರ್ಯಪಾಲಕ ಅಭಿಯಂತರರು ಸಹಾ ಸಭೆಗೆ ಹಾಜರಾಗುವುದಾಗಿ ತಿಳಿಸಲಾಯಿತು.

4. ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:

   1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಅದಷ್ಟು ಸುಸ್ಥಿತಿಯಲ್ಲಿಡುವುದು.
   2. ವಾರ್ಡ್ ವ್ಯಾಪ್ತಿಯಲ್ಲಿ ಆಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.
   3. ವಾರ್ಡ್ ಕಛೇರಿಯ ಆವರಣದಲ್ಲಿ ಒಂದು ವಿದ್ಯುತ್ ದೀಪವನ್ನು ಅಳವಡಿಸಬೇಕೆಂದು ತಿಳಿಸಲಾಯಿತು.

5. ಕಂದಾಯ ವಿಭಾಗ:

   1. ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಪಾವತಿಯನ್ನು ಬಾಕಿ ಉಳಿಸಿಕೊಂಡಿರುವ ಪ್ರಮುಖ ಸಂಸ್ಥೆಗಳನ್ನು ಗುರುತಿಸಿ ಇವುರುಗಳಿಂದ ಕಂದಾಯವನ್ನು ವಸೂಲಿ ಮಾಡಲು ಸೂಕ್ತ ಕ್ರಮಕೈಗೊಳ್ಳಲುವುದು.

6. ಜಲಮಂಡಳಿ ವಿಭಾಗ:

   1. ಮುನಿಸ್ವಾಮೇಗೌಡ ಬಡಾವಣೆಯಲ್ಲಿ ಸ್ಯಾನಿಟರಿ ಚೇಂಬರ್‌ಗಳು ಹೆಚ್ಚಾಗಿ ಮಣ್ಣಿನಿಂದ ತುಂಬಿದ್ದು, ಇವುಗಳನ್ನು ಸುವುಗೊಳಿಸಿಕೊಡಬೇಕೆಂದು ಮನವಿ ಮಾಡಿದರು. ಅದರಂತೆ ರಾಜೇಶ್ ಬಿಡ್ಲುಎಸ್‌ಎಸ್‌ಬಿ ವಿಭಾಗದವರು ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

7. ಅರಣ್ಯ ಇಲಾಖೆ:-

   1. ಅರಣ್ಯ ವಿಭಾಗದವರು ವಾರ್ಡ್ ಸಮಿತಿ ಸಭೆಗೆ ಹಾಜರಾಗಿರುವುದಲ್ಲ, ನೋಡೆಲ್ ಅಧಿಕಾರಿಯವರು ದೂರವಾಣಿ ಮೂಲಕ ಸಂಪರ್ಕಿಸಿ, ಪಂಪಾ ಬಡಾವಣೆ ಮತ್ತು ಅಮೃತನಗರ ಮಾರುತಿ ಪಾರ್ಮ್ ಹತ್ತಿರ ಪೂರ್ಣವಾಗಿ ಒಣಗಿಹೋಗಿರುವ ಮರಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತೆರವುಮಾಡಬೇಕೆಂದು ಸೂಚಿಸಲಾಗಿರುತ್ತದೆ. ಸದರಿ ವಿಷಯ ಬಗ್ಗೆ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಲಾಗಿದೆ.

(signature) N.D

ಕಾರ್ಯದರ್ಶಿ

ವಾರ್ಡ್ 07